# ವಿವರಣೆ

## ವಹವ್ವಾರೆ ಮೆಣಸಿನಕಾಯಿ ಮುಂಡಿಗೆ

ವಹವ್ವಾರೆ ಮೆಣಸಿನಕಾಯಿ

ಒಣರೊಟ್ಟಿಗೆ ತಂದೆನೊ ತಾಯಿ   | ಪ |

ಹುಟ್ಟುತಲಿ ಹಸಿರಾಗುತ ಕಂಡೆ

ನಟ್ಟನಡುವೆ ಕೆಂಪಾಗುತ ಕಂಡೆ

ಕಟ್ಟೆರಾಯನ ಬಹುರುಚಿಯೆಂಬೆ   | ೧ |

ಒಂದೆರಡೆರದರೆ ಬಹುರುಚಿಯೆಂಬೆ

ಮೇಲೆರಡೆರೆದರೆ ಬಹು ಖಾರೆಂಬೆ ಅದೂ

ಎರಡೆರೆದರೆ ಅತಿ ಖಾರೆಂಬೆ   | ೨ |

ಬಡವರಿಗೆಲ್ಲ ನಿನ್ನಾಧಾರ ಅಡಿಗೆ ಊಟಕೆ ನಿನ್ನಾಸಾರ

ಬಾಯಲಿ ಕಡಿದರೆ ಬೆಂಕಿಯ ಖಾರ

ಪುರಂದರ ವಿಠಲನ ನೆನೆಯೋದು ಭಾರ   | ೩ |

ವಹವ್ವಾರೆ ಮೆಣಸಿನಕಾಯಿ –

ಪ್ರತಿಯೊಬ್ಬ ಜೀವಿಗಳು ವಿಚಿತ್ರ ಸ್ವಭಾವವುಳ್ಳವರಾಗಿರುತ್ತಾರೆ. – ವಹವ್ವಾರೆ. "ಬಹು ಚಿತ್ರ ಜಗದ್ಬಹುದಾಕರಣಾತ್ ಪರಶಕ್ತಿರನಂತ ಗುಣ: ಪರಮ:". ಭೇದದಿಂದ ಕೂಡಿರುವ ಈ ಚಿತ್ರ ವಿಚಿತ್ರ ಜಗತ್ತನ್ನು ನೋಡಿಯಾದರೂ ಭಗವಂತನನ್ನು ಅರಿಯಬೇಕು. ದಪ್ಪ ಮೆಣಸಿನಕಾಯಿ, ಖಾರ ಮೆಣಸಿನಕಾಯಿ, ಚಿಕ್ಕ ಮೆಣಸಿನಕಾಯಿ, ಬೋಂಡ ಮೆಣಸಿನಕಾಯಿ, ಬ್ಯಾಡಗಿ ಮೆಣಸಿನಕಾಯಿ,

ಗುಂಟೂರು ಮೆಣಸಿನಕಾಯಿ ವಿಚಿತ್ರ ಆಕಾರ – ರುಚಿ ಹೇಗೆ ಚಿತ್ರ ವಿಚಿತ್ರವಾಗಿರತ್ತೋ ಅದೇ ರೀತಿ ಜೀವಿಗಳೆಲ್ಲ ಸಾತ್ವಿಕ ರಾಜಸ ತಾಮಸವೆಂದು ಭಿನ್ನರಾಗಿರುತ್ತಾರೆ.

ಒಣರೊಟ್ಟಿಗೆ ತಂದೆನೋ ತಾಯಿ : ಒಣರೊಟ್ಟಿ – ಸಾರರಹಿತ ಸಂಸಾರ; ತಾಯಿ – ಪ್ರಕೃತಿ ಮಾತೆ ಲಕ್ಷ್ಮೀದೇವಿ.

ಹುಟ್ಟುತಲೀ ಹಸಿರಾಗುತ ಕಂಡೆ : – ಮೆಣಸಿನಕಾಯಿ ಹುಟ್ಟಿದಾಗ ಹಸಿರಾಗಿರುತ್ತೆ. ಹುಟ್ಟುವಾಗ (ಬಾಲ್ಯದಲಿ) ಸಂಸಾರದ ಹೊರೆ, ಮುಂದಿನ ಭಯ, ಯಾವುದೂ: ತಿಳಿಯದೆ ಜಗತ್ತು ಹಸಿರಾಗಿಯೇ ಕಂಡಿತು.

ನಟ್ಟನಡುವೆ ಕೆಂಪಾಗುತ ಕಂಡೆ : – ನಟ್ಟನಡುವೆ ಅಂದರೆ ತಾರುಣ್ಯದಲ್ಲಿ – ಬಿಸಿ ರಕ್ತವಿರುತ್ತದೆ. ಮೆಣಸಿನಕಾಯಿ ಕೆಂಪಾಗಿರುತ್ತೆ. ಯೌವನ – ಕೋಪ ತಾಪಗಳ ಸಂಗಮ – ಲೌಕಿಕಾವಸ್ಥೆಯಲ್ಲಿ ಮುಳುಗಿ ಭಗವಂತನನ್ನೇ ಮರೆತಿರುತ್ತೇವೆ.

ಕಟ್ಟೆರಾಯನ ಬಲುರುಚಿಯೆಂಬೆ – ಕಟ್ಟೆರಾಯ ಅಂದರೆ ಭಗವಂತನಿರುವವರೆಗೂ ಯೌವ್ವನದ ಹಾರಾಟ ನಡೆಯುತ್ತಿರುತ್ತೆ. ತಟ್ಟೇರಾಯನಂತೆ ತಾನು ಅಸ್ವತಂತ್ರನಾದರೂ ಸ್ವತಂತ್ರನಾದ ಕಟ್ಟೆಯ (ಸಿಂಹಾಸನ) ಮೇಲೆ ಕುಳಿತಿರುವನಂತೆ ತಿಳಿದು ಹಾಳಾಗುವುದು. ಈ ಸಾಂಸಾರಿಕ ವಿಷಯ ವಸ್ತುಗಳು ವಿಷದಂತಿದ್ದರೂ ಅರ್ಥವಾಗದೆ ಬಲುರುಚಿಯಾಗಿದೆ ಎಂದೇ ಭ್ರಮಿಸುವೆವು. ಇದನ್ನೇ ಕಟ್ಟೇರಾಯನಿಗೆ ಬಲುರುಚಿಯೆಂಬೆ ಎಂದಿದ್ದಾರೆ.

ಒಂದೆರಡೆರೆದರೆ ಬಹುರುಚಿಯೆಂಬೆ – (ಒಂದು + ಎರಡು = ಮೂರು) ಈ ಸಂಸಾರದಲ್ಲಿ ಯೌವ್ವನ, ಮದದ ಜೊತೆಗೆ ಹಾಳು ಮಾಡಲು ಕಾಮ, ಕ್ರೋಧ, ಲೋಭಗಳು (ಅಂದರೆ ಒಂದರ ಜೊತೆಗೆ ಇನ್ನೊಂದೆರಡು ಮೆಣಸಿನಕಾಯಿ ಸೇರಿಸಿದರೆ) ಬಹುರುಚಿಯೆಂಬಂತೆ ಇರುತ್ತೆ ಈ ಸಂಸಾರ.

ಅದು ಎರಡೆರದರೆ ಅತಿ ಖಾರೆಂಬೆ – ಈ ಕಾಮ ಕ್ರೋಧಾದಿಗಳ ಜೊತೆ ಇನ್ನೂ ಎರಡು ಮೆಣಸಿನಕಾಯಿ ಸೇರಿದರೆ ( ೩ ೨ = ೬) ಕಾಮ ಕ್ರೋಧಾದಿ ಆರು ಸೇರಿದರೆ, ಭಗವಂತನ ಸ್ಮರಣೆಯೇ ಇಲ್ಲದೇ ತಾನೇ ಸರ್ವ ಸ್ವತಂತ್ರವೆಂಬ ದುರಹಂಕಾರ ಬಂದು ಮೆರೆವಾಗ, ಇನ್ನೊಬ್ಬ ಬಲಿಷ್ಟನಿಂದ ಅವಮಾನವಾದಾಗ ಬಹುಖಾರೆಂಬ ಅವಮಾನವಾಯಿತು.

ಅದು ಎರಡೆರದರೆ ಅತಿ ಖಾರೆಂಬೆ – ಈ ಕಾಮ ಕ್ರೋಧಾದಿಗಳ ಜೊತೆಗೆ ಇನ್ನೂ ಎರಡು ಮೆಣಸಿನಕಾಯಿಗಳು ಸೇರಿದರೆ (೬ + ೨ = ೮) ಅಷ್ಟ ಮದಗಳೂ ಸೇರಿದ್ದರೆ, ಅಂದರೆ ಯೌವ್ವನ, ಧನ, ಅಧಿಕಾರ, ಅವಿವೇಕಾದಿಗಳೂ ಸೇರಿದ್ದರೆ; ಇವುಗಳಲ್ಲಿ ಒಂದೊಂದಿದ್ದರೂ ಅನರ್ಥಕಾರಿ. ಎಲ್ಲವೂ ಸೇರಿದರೆ ಕೇಳುವುದೇ ಬೇಡ. ಬಡವರಿಗೆಲ್ಲಾ ನಿನ್ನಾಧಾರ – ಭಗವಂತನ ಭಕ್ತರಾದ ಕುಚೇಲ ಮೊದಲಾದವರಿಗೆಲ್ಲ ನಿನ್ನ ನಾಮವೇ ಆಧಾರ. ಭೋಜನ ಮಾಡುವಾಗಲೂ ಗೋವಿಂದ ಎಂದು ಉಚ್ಚರಿಸುತ್ತಾ ಭುಂಜಿಸಬೇಕು. ಅಡಿಗೆ ಮಾಡುವಾಗಲೂ ಭಗವಂತನ ನಾಮೋಚ್ಚಾರಣ ಪೂರ್ವಕ ಮಾಡಬೇಕು.

ಬಾಯಲ್ಲಿ ಕಡಿದರೆ ಬೆಂಕಿಯ ಖಾರ – ಬಾಯಲ್ಲಿ ಮೆಣಸಿನಕಾಯಿ ಕಡಿದರೆ ಹೇಗೆ ಖಾರದಿಂದ ಭಗವಂತನ ಸ್ಮರಣೆ ಕಷ್ಟವೋ, ಹಾಗೆ ಸಂಸಾರಿಕ ವಿಷಗಳಿಂದ ಕಾಮ ಕ್ರೋಧಾದಿ ಕಿಚ್ಚುಗಳಿಂದ ಪುರಂದರ ವಿಠಲನ ನೆನೆಯೋದು ಅತಿ ಪ್ರಯಾಸಕರವಾದದ್ದು. ಆದ್ದರಿಂದ ಈ ಮೆಣಸಿನಕಾಯಿಯಂತೆ ಭಗವಂತರನ್ನು ಮರೆಸುವ ಈ ವಿಷಯ ಪದಾರ್ಥಗಳನ್ನು ತೊರೆದು, ಭಗವನ್ನಾಮಾಮೃತವನ್ನು ಪಾನ ಮಾಡಿರಿ ಎಂದಿದ್ದಾರೆ ಪುರಂದರ ದಾಸರು.

**********